# ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಓಪರೇಟಿವ್ ಸೊಸೈಟಿ ಲಿ. ಮಂಗಳೂರು
# ವಾರ್ಷಿಕ ಮಹಾಸಭೆ




ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಓಪರೇಟಿವ್ ಸೊಸೈಟಿಯ 24ನೇ ವಾರ್ಷಿಕ ಮಹಾಸಭೆ ದಿನಾಂಕ 16.09.2018ರಂದು ಸಂಘದ ಅಧ್ಯಕ್ಷ ಕೆ. ಜೈರಾಜ್ ಬಿ. ರೈಯವರ ಅಧ್ಯಕ್ಷತೆಯಲ್ಲಿ ಮಂಗಳೂರಿನ ಉರ್ವ ಸೆಂಟನರಿ ಚರ್ಚ್ ಹಾಲ್‌ನಲ್ಲಿ ಜರಗಿತು.

ಸಂಘವು ಪ್ರಸ್ತುತ ರೂ.170 ಕೋಟಿ ಠೇವಣಿ, ರೂ.138 ಕೋಟಿ ಹೊರಬಾಕಿ ಸಾಲದೊಂದಿಗೆ ಸಂಘದ ಒಟ್ಟು ವ್ಯವಹಾರ ರೂ.308 ಕೋಟಿ ತಲುಪಿದೆ. ನಿವ್ವಳ ಅನುತ್ಪಾದಕ ಆಸ್ತಿ ಶೂನ್ಯ ಪ್ರಮಾಣದಲ್ಲಿದ್ದು, 2017-18ನೇ ಸಾಲಿನ ಸಂಘದ ಅಮೂಲಾಗ್ರ ಪ್ರಗತಿಯನ್ನು ಪರಿಗಣಿಸಿ ಎಸ್.ಸಿ.ಡಿ.ಸಿ.ಸಿ ಬ್ಯಾಂಕ್ ಕೊಡಮಾಡುವ ಸಾಧನಾ ಪ್ರಶಸ್ತಿಯು ಸಂಘಕ್ಕೆ ಲಭಿಸಿದೆ, 2018-19 ಸಾಲಿನಲ್ಲಿ ಪುತ್ತೂರಿನ ಕಡಬ ಮತ್ತು ಮಂಗಳೂರಿನ ಹಂಪನಕಟ್ಟೆಯಲ್ಲಿ ಎರಡು ಹೊಸ ಶಾಖೆಗಳನ್ನು ಶೀಘ್ರದಲ್ಲಿ ಆರಂಭಿಸಲಾಗುವುದು. ಅಲ್ಲದೆ ಮತ್ತೆರಡು ಹೊಸ ಶಾಖೆಗಳನ್ನು ತೆರೆಯಲು ಕ್ರಮವಿಡಲಾಗುವುದು ಮತ್ತು ಐದು ಶಾಖೆಗಳನ್ನು ನವೀಕರಿಸಲು ಕಾರ್ಯಯೋಜನೆ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಶ್ರೀ ಕೆ. ಜೈರಾಜ್ ಬಿ. ರೈಯವರು ಸಭೆಗೆ ತಿಳಿಸಿದರು.

2017-18ನೇ ಸಾಲಿಗೆ ರೂ.4.71 ಕೋಟಿ ನಿವ್ವಳ ಲಾಭ ಗಳಿಸಿ ಸದಸ್ಯರ ಪಾಲು ಬಂಡವಾಳಕ್ಕೆ ಶೇ.23 ಡಿವಿಡೆಂಡನ್ನು ನೀಡುವುದೆಂದು ಮಹಾಸಭೆಯಲ್ಲಿ ನಿರ್ಧರಿಸಲಾಯಿತು.

ಸಂಘವು 2017-18ನೇ ಸಾಲಿನಲ್ಲಿ ಸಾರ್ವಕಾಲಿಕ ದಾಖಲೆಯ ಪ್ರಗತಿ ಸಾಧನೆಯನ್ನು ಸದಸ್ಯರು ಶ್ಲಾಘಿಸಿ ಸಂಘದ ಈ ಅಪ್ರತಿಮ ಸಾಧನೆಗೆ ಕಾರಣ ಕರ್ತರಾದ ಅಧ್ಯಕ್ಷರು, ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗವನ್ನು ಅಭಿನಂದಿಸಿದರು.

ಸಂಘದ ಉಪಾಧ್ಯಕ್ಷರಾದ ಶ್ರೀಮತಿ ಲಕ್ಷ್ಮಿ ಜಯಪಾಲ ಶೆಟ್ಟಿ ಹಾಗೂ ನಿರ್ದೇಶಕರುಗಳಾದ ಶ್ರೀಮತಿ ಎ. ರತ್ನಕಾಂತಿ ಶೆಟ್ಟಿ, ಶ್ರೀ ಕೆ. ಸೀತಾರಾಮ ರೈ ಸವಣೂರು, ಡಾ। ಕೆ. ಸುಭಾಶ್ಚಂದ್ರ ಶೆಟ್ಟಿ, ಶ್ರೀ ಪಿ. ಶಿವರಾಮ ಅಡ್ಯಂತಾಯ, ಸಿಎ ಎಚ್.ಆರ್. ಶೆಟ್ಟಿ, ಶ್ರೀ ವಿಠಲ ಪಿ. ಶೆಟ್ಟಿ, ಶ್ರೀ ಯಂ. ರಾಮಯ ಶೆಟ್ಟಿ, ಶ್ರೀ ಎಂ. ಸೀತಾರಾಮ ಶೆಟ್ಟಿ, ಶ್ರೀ ಪಿ.ಬಿ. ದಿವಾಕರ ರೈ, ಶ್ರೀ ರವೀಂದ್ರನಾಥ ಜಿ. ಹೆಗ್ಡೆ, ಶ್ರೀ ಕೆ. ದಯಾಕರ್ ಆಳ್ವ, ಬೆಳ್ಳಿಪಾಡಿ ಶ್ರೀ ಪ್ರಸಾದ್ ಕೌಶಲ್ ಶೆಟ್ಟಿ, ಡಾ। ಎಂ. ಸುಧಾಕರ ಶೆಟ್ಟಿರವರು ಉಪಸ್ಥಿತರಿದ್ದರು.

ಪ್ರಭಾರ ಮಹಾಪ್ರಬಂಧಕರಾದ ಶ್ರೀ ಗಣೇಶ್ ಜಿ.ಕೆ.ಯವರು ಲೆಕ್ಕಪರಿಶೋಧಿತ ಆರ್ಥಿಕ ತಃಖ್ತೆ, ಲಾಭ ವಿಂಗಡನೆ, ಬಜೆಟ್, ಬೈಲಾ ತಿದ್ದುಪಡಿ ಪ್ರಸ್ತಾವನೆಗಳನ್ನು ಮಂಡಿಸಿದರು.

2017-18 ಸಾಲಿನಲ್ಲಿ ನಿಗದಿತ ಗುರಿಗಳನ್ನು ಸಾಧಿಸಿ ಅತ್ಯುತ್ತಮ ಕಾರ್ಯನಿರ್ವಹಣೆ ತೋರಿದ ಶಾಖೆಗಳನ್ನು ಹಾಗೂ 2017-18 ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಸಿಬ್ಬಂದಿಗಳ ಮಕ್ಕಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ನಿರ್ದೇಶಕರಾದ ಶ್ರೀ ಕೆ. ಸೀತಾರಾಮ ರೈ ಸವಣೂರು ಸ್ವಾಗತಿಸಿ, ಶ್ರೀ ಎಂ. ರಾಮಯ ಶೆಟ್ಟಿಯವರು ವಂದಿಸಿದರು. ಸಿಬ್ಬಂದಿಗಳಾದ ಶ್ರೀ ಮೋಹನ್‌ದಾಸ್ ಶೆಟ್ಟಿ ಮತ್ತು ಶ್ರೀ ಚಂದ್ರಹಾಸ್ ಶೆಟ್ಟಿಯವರು ಕಾರ್ಯಕ್ರಮ ನಿರೂಪಿಸಿದರು.